# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಮಾನ್ಯ ಮುಖ್ಯಮಂತ್ರಿಗಳ ಅಭಿವೃದ್ಧಿ ಯೋಜನೆ ಅನುಷ್ಠಾನಗೊಳಿಸಲು ಕ್ರಿಯಾ ಯೋಜನೆಯ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 159 ಎಂಡಿಎಸ್ 2015, ದಿನಾಂಕ: 22-09-2015.
2. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 169 ಎಂಡಿಎಸ್ 2017, ದಿನಾಂಕ:06-04-2017.
3. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 169 ಎಂಡಿಎಸ್ 2017, ದಿನಾಂಕ: 06-04-2017.

<><><>

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ ಸರ್ಕಾರದ ಆದೇಶದನ್ವಯ **"ಮಾನ್ಯ ಮುಖ್ಯಮಂತ್ರಿಗಳ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆ"**ಯನ್ನು ನಿಗಧಿತ ಮಾರ್ಗಸೂಚಿಗಳೊಂದಿಗೆ ಅನುಷ್ಠಾನಗೊಳಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರಲ್ಲಿ ಸರ್ಕಾರದ ಆದೇಶದನ್ವಯ ಈ ಯೋಜನೆಯನ್ನು 2017-18ನೇ ಸಾಲಿನಲ್ಲಿ ಮುಂದುವರೆಸಿ ಆದೇಶಿಸಲಾಗಿದೆ. ಮತ್ತು ಈ ಯೋಜನೆಗೆ ಪ್ರಸಕ್ತ ಆರ್ಥಿಕ ವರ್ಷ 2017-18ನೇ ಸಾಲಿನ ಲೆಕ್ಕಶೀರ್ಷಿಕೆ: 4225-03-277-2-10ರಡಿ ರೂ.100.00 ಕೋಟಿಗಳ ಅನುದಾನವನ್ನು ಒದಗಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3)ರ ಸರ್ಕಾರದ ಆದೇಶದನ್ವಯ ಸದರಿ ಯೋಜನೆಗೆ ಒದಗಿಸಲಾದ ಅನುದಾನಕ್ಕೆ ಮೊದಲನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆಗೊಳಿಸಿ ಆದೇಶಿಸಲಾಗಿದೆ.

ಈ ಯೋಜನೆಗೆ ಒದಗಿಸಲಾಗಿರುವ ಅನುದಾನಕ್ಕೆ ರೂ.100.00ಕೋಟಿಗಳ ಅನುದಾನಕ್ಕೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಿಯಾ ಯೋಜನೆಯನ್ನು ಸಿದ್ದಪಡಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: MWD 356 MDS 2017 ಬೆಂಗಳೂರು,ದಿನಾಂಕ:08-08-2017**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ **"ಮಾನ್ಯ ಮುಖ್ಯಮಂತ್ರಿಗಳ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆ"**ಯಡಿ 2017-18ನೇ ಸಾಲಿನ ಲೆಕ್ಕಶೀರ್ಷಿಕೆ:4225-03-277-2-10ರಡಿ ಒದಗಿಸಲಾಗಿರುವ ರೂ.100.00ಕೋಟಿಗಳ ಅನುದಾನದಲ್ಲಿ ಕೆಳಕಂಡ ಕಾರ್ಯಕ್ರಮಗಳನ್ನು ಆಯಾ ಕಾರ್ಯಕ್ರಮದ ಮುಂದೆ ಸೂಚಿಸಿರುವ ಅನುದಾನವನ್ನು ಮೀಸಲಿರಿಸಿ, ಸದರಿ ಅನುದಾನದ ಮಿತಿಯೊಳಗೆ ಅನುಷ್ಠಾನಗೊಳಿಸಲು ಕ್ರಿಯಾ ಯೋಜನೆಗೆ ಅನುಮೋದನೆ ನೀಡಿ ಆದೇಶಿಸಿದೆ.

....2

| ಕ್ರ. ಸಂ | ಕ್ರಿಯಾ ಯೋಜನೆಯನ್ವಯ ಹಮ್ಮಿಕೊಳ್ಳಲಾದ ಕಾರ್ಯಕ್ರಮಗಳು | ಮೀಸಲಿರಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|
| 1 | ಮೊರಾರ್ಜಿದೇಸಾಯಿ ವಸತಿ ಶಾಲೆಯ ಗ್ರಂಥಾಲಯ ಕಾಮಗಾರಿ ಮತ್ತು ಮಲ್ಟಿಪರ್ಪಸ್ ಹಾಲ್ | 500.00 |
| 2 | ಮೌಲಾನ ಅಜಾದ್ ಭವನ ಕಟ್ಟಡ ನಿರ್ಮಾಣ ಮತ್ತು ಮೂಲ ಸೌಲಭ್ಯ | 1000.00 |
| 3 | ಸರ್ಕಾರಿ ಉರ್ದು ಪ್ರಾಥಮಿಕ/ಪ್ರೌಢ ಶಾಲೆಗಳಿಗೆ ಹೆಚ್ಚುವರಿ ಕೊಠಡಿಗಳ ಮತ್ತು ಶೌಚಾಲಯ ನಿರ್ಮಾಣ ಕಾಮಗಾರಿ | 2000.00 |
| 4 | ವಿದೇಶದಲ್ಲಿ ಉನ್ನತ ವ್ಯಾಸಂಗ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ | 2500.00 |
| 5 | ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ. ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ | 150.00 |
| 6 | ಮಾನ್ಯ ಮುಖ್ಯಮಂತ್ರಿಗಳ 9 ಅಂಶಗಳ ಕಾರ್ಯಕ್ರಮ (ಮೌಲಾನಾ ಅಜಾದ್ ಮಾದರಿ ಶಾಲೆಗಳಿಗೆ ಮೂಲಭೂತ ಸೌಕರ್ಯ) | 500.00 |
| 7 | ವಕ್ಫ್ ಆಸ್ತಿಗಳ ಸಂರಕ್ಷಣೆ | 2500.00 |
| 8 | ವಕ್ಫ್ ಸಂಸ್ಥೆಗಳ ಮುತ್ತುವಲ್ಲಿ ಸಮಾವೇಶ, ವಕ್ಫ್ ಸಿಬ್ಬಂದಿ ತರಬೇತಿ, ಜಿಲ್ಲಾ ಕಛೇರಿಗಳಿಗೆ ಮೂಲಭೂತ ಸೌಕರ್ಯ ಮತ್ತು ಗಣಕೀಕರಣ ಸೌಲಭ್ಯ | 350.00 |
| | **ಒಟ್ಟು** | **9500.00** |
| **(ಒಂಭತ್ತು ಸಾವಿರದ ಐದುನೂರು ಲಕ್ಷ ರೂಪಾಯಿಗಳು ಮಾತ್ರ)** | | |

ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರದ ಆದೇಶ ಸಂಖ್ಯೆ: MWD 159 MDS 2015, ದಿನಾಂಕ:22-09-2015ರಲ್ಲಿನ ನಿಗಧಿತ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿತಕ್ಕದ್ದು.

ಕ್ರಮ ಸಂಖ್ಯೆ:07 ಮತ್ತು 08ರಲ್ಲಿ ಸೂಚಿಸಿರುವ ಕಾರ್ಯಕ್ರಮವನ್ನು ನಿಯಮಾನುಸಾರ ಹಮ್ಮಿಕೊಳ್ಳಲು ಮೀಸಲಿರಿಸಿದ ಅನುದಾನದೊಂದಿಗೆ ಮುಖ್ಯಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಇವರಿಗೆ ವಹಿಸಲು ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು ಸೂಕ್ತ ಕ್ರಮವಹಿಸತಕ್ಕದ್ದು.

....3